**ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಾಮರಾಜನಗರ**

**ಸಂಖ್ಯೆ: ಎಂಯುಎನ್(ಜಿನಅಕೋ) 388/2006-07 ದಿನಾಂಕ: 05.09.2015**

# ನೇಮಕಾತಿ ಅಧಿಸೂಚನೆ

## 01. ಅಕೌಂಟೆಂಟ್/ ಅಕೌಂಟಿಂಗ್ ಕನ್ಸಲ್ಟೆಂಟ್ ಹುದ್ದೆಗಳು

| ಕ್ರಮ ಸಂಖ್ಯೆ | ನಗರ ಸ್ಥಳೀಯ ಸಂಸ್ಥೆಯ ಹೆಸರು | ಹುದ್ದೆಯ ಸಂಖ್ಯೆ | ನಗರ ಸ್ಥಳೀಯ ಸಂಸ್ಥೆಗಳ ಒಟ್ಟು ಹುದ್ದೆಗಳ ಸಂಖ್ಯೆ | ವೇತನ/ ಕನ್ಸಲ್‌ಟೆನ್ಸಿ ಶುಲ್ಕ |
|---|---|---|---|---|
| 1) | ನಗರಸಭೆ, ಕೊಳ್ಳೇಗಾಲ | 01 | 03 | ರೂ.8000/- |
| 2) | ಪುರಸಭೆ, ಗುಂಡ್ಲುಪೇಟೆ | 01 | | |
| 3) | ಪಟ್ಟಣ ಪಂಚಾಯಿತಿ, ಹನೂರು | 01 | | |

## 02. ಅಕೌಂಟೆಂಟ್/ ಅಕೌಂಟಿಂಗ್ ಕನ್ಸಲ್ಟೆಂಟ್ ಹುದ್ದೆಗಳ ಮೀಸಲಾತಿ

**01** ಪರಿಶಿಷ್ಟ ಜಾತಿ (01 ಹುದ್ದೆ)

**02** ಪರಿಶಿಷ್ಟ ಪಂಗಡ (01 ಹುದ್ದೆ)

**03** ಸಾಮಾನ್ಯ ಅಭ್ಯರ್ಥಿ (01 ಹುದ್ದೆ)

## 03. ವಿದ್ಯಾರ್ಹತೆ:

03 ನಿಗಧಿತ ವಿದ್ಯಾರ್ಹತೆ ಅಭ್ಯರ್ಥಿಯು ಬಿ.ಕಾಂ ಪದವಿಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣಗೊಂಡಿರಬೇಕು. (ಶೇಕಡವಾರು ಅಂಕಗಳನ್ನು ಎಲ್ಲಾ ವರ್ಷ/ಸೆಮಿಸ್ಟರ್‌ಗಳನ್ನು ಸೇರಿಸಿ ಲೆಕ್ಕಿಸುವುದು)

04. <u>ಅರ್ಜಿ ನಮೂನೆ/ ಅಧಿಸೂಚನೆ</u>

ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆ ಹಾಗೂ ನೇಮಕಾತಿ ಅಧಿಸೂಚನೆಯನ್ನು ಜಿಲ್ಲಾ ನಗರಾಭಿವೃದ್ಧಿ ಕೋಶ ಕಛೇರಿಯಲ್ಲಿ ಪಡೆಯಬಹುದು ಅಥವಾ **www.chamarajanagaracity.gov.in** ಮತ್ತು ಜಿಲ್ಲೆಯ ಇತರೆ ನಗರ ಸ್ಥಳೀಯ ಸಂಸ್ಥೆಗಳ ವೆಬ್‌ಸೈಟ್‌ಗಳಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿಯನ್ನು ಪಡೆದು ಅಭ್ಯರ್ಥಿಗಳು ಅಧಿಸೂಚನೆಯನ್ನು ಸಂಪೂರ್ಣವಾಗಿ ಓದಿ ಇತ್ತೀಚಿನ ಭಾವಚಿತ್ರದೊಂದಿಗೆ ಅರ್ಜಿಯನ್ನು ಭರ್ತಿ ಮಾಡಿ ನಿಗದಿತ ಸ್ಥಳದಲ್ಲಿ ಸಹಿ ಮಾಡಿರತಕ್ಕದ್ದು.

05. **ಭರ್ತಿಮಾಡಿದ ಅರ್ಜಿಯೊಂದಿಗೆ ಈ ಕೆಳಕಂಡ ದಾಖಲಾತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸತಕ್ಕದ್ದು.**

01. ಎಸ್.ಎಸ್.ಎಲ್.ಸಿ. ಅಂಕಪಟ್ಟಿ

02.ಪಿ.ಯು.ಸಿ. ಅಂಕಪಟ್ಟಿ ( ಲಭ್ಯವಿದ್ದಲ್ಲಿ)

03.ಪದವಿಯ ಎಲ್ಲಾ ಸೆಮಿಸ್ಟರ್/ ವರ್ಷಗಳ ಅಂಕಪಟ್ಟಿಗಳು.

04.ಪದವಿ ಘಟಿಕೋತ್ಸವ ಪ್ರಮಾಣ ಪತ್ರ (ಲಭ್ಯವಿದ್ದಲ್ಲಿ)

05.ಸೇವಾ ಅನುಭವ ಪ್ರಮಾಣ ಪತ್ರಗಳು (ಲಭ್ಯವಿದ್ದಲ್ಲಿ)

06. <u>ಅರ್ಜಿ ಸಲ್ಲಿಸುವ ವಿಧಾನ</u> :

01. ಅಭ್ಯರ್ಥಿಯು ನಿಗಧಿತ ಭರ್ತಿ ಮಾಡಿದ ಅರ್ಜಿಯೊಂದಿಗೆ ಕಂಡಿಕೆ (5) ರಲ್ಲಿ ಸೂಚಿಸಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ **"ಮಾನ್ಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಛೇರಿ, ಚಾಮರಾಜನಗರ"** ಈ ವಿಳಾಸಕ್ಕೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ತಲುಪುವಂತೆ ನೋಂದಾಯಿತ ಅಂಚೆ (Register post) ಮೂಲಕ ಸಲ್ಲಿಸುವುದು.

02. ಅಂಚೆ ಕವರಿನ ಮೇಲೆ **"ಅಕೌಂಟೆಂಟ್/ ಅಕೌಂಟಿಂಗ್ ಕನ್ಸಲ್ಟೆಂಟ್ ಹುದ್ದೆಗಾಗಿ ಅರ್ಜಿ ಅಧಿಸೂಚನೆ ಸಂಖ್ಯೆ: ಎಂಯುಎನ್ (ಜಿನಅಕೋ) 388/2006–07, Category ---------------- ಎಂದು ನಮೂದಿಸತಕ್ಕದ್ದು.**

03. **ವಿಶೇಷ ಸೂಚನೆ** : ಅರ್ಜಿಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ಸಮಸ್ಯೆ ಎದುರಾದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶ ಕಛೇರಿಯ ದೂರವಾಣಿ ಸಂಖ್ಯೆ –08226–223761 ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

04. ವೇತನ/ಕನ್ಸಲ್‌ಟೆನ್ಸಿ ಶುಲ್ಕ: ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕವಾಗಿ ರೂ.8000/– ಗಳನ್ನು ಕನ್ಸಲ್ಟೆನ್ಸಿ ಶುಲ್ಕವಾಗಿ ನೀಡಲಾಗುವುದು. ಒಂದು ವರ್ಷದ ಸೇವೆಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ರೂ. 1000/– ಗಳನ್ನು ಇಂಕ್ರಿಮೆಂಟ್ ನೀಡಿ ರೂ. 9000/– ಗಳನ್ನು ಎರಡನೇ ವರ್ಷದಲ್ಲಿ ನೀಡಲಾಗುವುದು. 2ನೇ ವರ್ಷದ ಸೇವೆಗಳನ್ನು ತೃಪ್ತಿಕರವಾಗಿ ಪೂರ್ಣಗೊಳಿಸಿ ಸೇವೆಯನ್ನು ಮುಂದುವರೆಸಿದ ಅಭ್ಯರ್ಥಿಗಳಿಗೆ ವಾರ್ಷಿಕವಾಗಿ ಮೂಲವೇತನದ ಶೇಕಡ 7.5 ರಷ್ಟನ್ನು ಹೆಚ್ಚಿಸಲಾಗುವುದು. ಸದರಿ ಹುದ್ದೆಯನ್ನು ಸರ್ಕಾರದ ಆದೇಶದನ್ವಯ ಮುಂದುವರೆಸಲು ಕ್ರಮಕೈಗೊಳ್ಳಲಾಗುವುದು.

05. ಬಿ.ಕಾಂ. ಪದವಿಯನ್ನು ಪ್ರಥಮ ದರ್ಜೆಯಲ್ಲಿ ಉತ್ತೀರ್ಣಗೊಳಿಸಿದ ಅಭ್ಯರ್ಥಿಗಳು ಲಭ್ಯವಿದ್ದಲ್ಲಿ ಮಾತ್ರವೇ ದ್ವಿತೀಯ ದರ್ಜೆಯಲ್ಲಿ ತೇರ್ಗಡೆ ಹೊಂದಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

06.ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ದಿನಾಂಕ:07.10.2015 ರೊಳಗಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ ಕಛೇರಿಗೆ ಸಲ್ಲಿಸುವುದು.

ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**07. ನೇಮಕಾತಿ ವಿಧಾನ :**

01. ಅರ್ಭರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸಂದರ್ಶನ (ಮೂಲ ದಾಖಲಾತಿಗಳ ಪರಿಶೀಲನೆ) ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು.

02. **ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:** ಸ್ಪರ್ಧಾತ್ಮಕ ಪರೀಕ್ಷೆಯು ಒಂದು ಪತ್ರಿಕೆ–ಯನ್ನೊಳಗೊಂಡಿದ್ದು ವಸ್ತು ನಿಷ್ಟೆ ಆಯ್ಕೆ (Objective Multiple Choice) ಮಾದರಿಯಾಗಿರುತ್ತದೆ.

(ನಿಗಧಿಪಡಿಸಿರುವ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಒಬ್ಬ ವ್ಯಕ್ತಿಯಿಂದ ನೀರೀಕ್ಷಿಸಬಹುದಾದ Accountancy / Commerce/ Business studies ಸಂಬಂಧಪಟ್ಟ ಪ್ರಶ್ನೆಗಳು–100 ಅಂಕಗಳು

**ಒಟ್ಟು ಅಂಕಗಳು–100**

08. ಸ್ಮರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳರಡಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

09. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ 100 ಅಂಕಗಳಿಗೆ ಪಡೆದ ಒಟ್ಟು ಅಂಕಗಳನ್ನು 75 ಅಂಕಗಳಿಗೆ ಪರಿವರ್ತಿಸಿ, ಅರ್ಹತಾ ಪರೀಕ್ಷೆಯಲ್ಲಿ (ಬಿ.ಕಾಂ) ಪಡೆದ ಶೇಕಡವಾರು (ಎಲ್ಲಾ ವರ್ಷಗಳು/ ಸೆಮಿಸ್ಟರ್‌ಗಳು) ಅಂಕಗಳನ್ನು ಶೇಕಡ 25ಕ್ಕೆ ಪರಿವರ್ತಿಸಿ, ಒಟ್ಟು 100 ಅಂಕಗಳಿಗೆ ಮೆರಿಟ್ ಪಟ್ಟಿಯನ್ನು ತಯಾರಿಸಿ, ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ನೇಮಕಾತಿಯನ್ನು ಮಾಡಲಾಗುತ್ತಿದೆ.

10. ಸ್ಪರ್ಧಾತ್ಮಕ (ಲಿಖಿತ) ಪರೀಕ್ಷೆಯಲ್ಲಿ ನೇಮಕಾತಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ಸಂದರ್ಶನ (Document Verification) ಗೆ ಕರೆಯಲಾಗುವುದು. ಈ ಸುತ್ತಿನಲ್ಲಿ ಅಭ್ಯರ್ಥಿಗಳು ಅನುತೀರ್ಣಗೊಂಡಲ್ಲಿ ನಿಯಮಾನುಸಾರ ಮುಂದಿನ ಅಭ್ಯರ್ಥಿಗಳನ್ನು ಆಯ್ಕೆಯ ಸುತ್ತಿಗೆ ಪರಿಗಣಿಸಲಾಗುವುದು.

11. ನೇಮಕಾತಿ/ಆಯ್ಕೆ ಪ್ರಾಧಿಕಾರಿಗಳು, ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ಇವರೇ ಆಗಿರುತ್ತಾರೆ. ಆದುದರಿಂದ ನೇಮಕಾತಿಯಲ್ಲಿ ಯಾವುದೇ ಬದಲಾವಣೆಯನ್ನು ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ ಹಾಗೂ ನೇಮಕಾತಿ ಪ್ರಾಧಿಕಾರಿಗಳ ತೀರ್ಮಾನವೇ ಅಂತಿಮವಾಗಿರುತ್ತದೆ.

<u>ಸೂಚನೆ</u>: ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ **(Acknowledgement)** ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

ಸಂದರ್ಶನ ನಡೆಸುವ ಉದ್ದೇಶ ಎಂದರೆ ಅಭ್ಯರ್ಥಿಗಳು ಆಯ್ಕೆ ಬಯಸಿದ ಹುದ್ದೆಗೆ ಅವರ ಅರ್ಹತೆ, ವ್ಯಕ್ತಿತ್ವ, ಸಂಬಂಧಿತ ವಿಷಯದಲ್ಲಿ ವ್ಯಕ್ತಪಡಿಸುವ ಸಾಮರ್ಥ್ಯತೆ, ಸೂಕ್ಷ್ಮತೆ ಮತ್ತು ಕರ್ತೃವ್ಯ ಶಕ್ತಿ, ಸಾಮಾನ್ಯ ಜ್ಞಾನ ಹಾಗೂ ವಿಷಯದಲ್ಲಿನ ಪರಿಜ್ಞಾನ ಹಾಗೂ ಇನ್ನಿತರ ವಿಶೇಷ ಗುಣಗಳನ್ನು ನಿರ್ಧರಿಸುವುದಾಗಿರುತ್ತದೆ.

**12. ಆಯೋಗದೊಡನೆ ಪತ್ರ ವ್ಯವಹಾರ:**

ಸಂದರ್ಶನಕ್ಕೆ ಅನುಮತಿಸಲಾದ (ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ) ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳು ತಲುಪದಿದ್ದಲ್ಲಿ ಸಂದರ್ಶನ/ಮೂಲ ದಾಖಲಾತಿಯ ಪರಿಶೀಲನೆಗೆ ಸೂಚನಾ ಪತ್ರದ ನಕಲನ್ನು ನೀಡಲಾಗುವುದು. ವಿಳಾಸ ಬದಲಾವಣೆ ಇದ್ದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದು. ಆಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಈ ಕೆಳಕಂಡ ಮಾಹಿತಿಯನ್ನು ಒಳಗೊಂಡಿರಬೇಕು.

1) ಹುದ್ದೆ/ ವಿಷಯದ ಹೆಸರು

2) ಅಭ್ಯರ್ಥಿಯು ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

3) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

**13. ಪ್ರಾಮುಖ್ಯವಾದ ಸೂಚನೆಗಳು:**

ಅರ್ಜಿದಾರರು ಇತ್ತೀಚಿನ ಪಾಸಪೋರ್ಟ್ ಭಾವಚಿತ್ರವನ್ನು ಅರ್ಜಿಯಲ್ಲಿ ಅಂಟಿಸಿ, ಅರ್ಜಿಯ ಮೇಲೆ ಸಹಿ ಮಾಡಿರತಕ್ಕದ್ದು. ಸಹಿಯನ್ನು ಮಾಡದ ಅರ್ಜಿಗಳು ತಿರಸ್ಕೃತಗೊಳುತ್ತವೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕೊನೆಯ ವರ್ಷದ ಬಿ.ಕಾಂ ಪದವಿಯನ್ನು ಮುಗಿಸಿ ಅಂತಿಮ ವರ್ಷದ /ಸೆಮಿಸ್ಟರ್‌ನ ಫಲಿತಾಂಶ ಬಂದಾಗ್ಯೂ ಘಟಿಕೋತ್ಸವ ಪ್ರಮಾಣ ಪತ್ರವನ್ನು ಇನ್ನು ಪಡೆಯದೇ ಇದ್ದರೂ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

14. ಅಭ್ಯರ್ಥಿಗಳು ನಿಗಧಿಪಡಿಸಿದ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಿರುವ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು. ಸಂದರ್ಶನಕ್ಕೆ / ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹವಾದಾಗ ಆ ಸಮಯದಲ್ಲಿ ಎಲ್ಲಾ ಪ್ರಮಾಣಪತ್ರಗಳನ್ನು ಪರಿಶೀಲನೆಗೆ

ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರದ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹ ಗೊಳಿಸಲಾಗುವುದು.

15. **ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು/ಸುಳ್ಳು ಹೇಳಿಕೆ/ ಮಾಹಿತಿ ನೀಡಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವೆನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವನೆಂದು ಅಥವಾ ನೇಮಕಾತಿಗೆ ಸಂಬಂಧಪಟ್ಟ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು /ಅವಳು ಸ್ವತ: ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ ಆಯ್ಕೆಯಿಂದ ಅಭ್ಯರ್ಥಿತ್ವನ್ನು ರದ್ದುಪಡಿಸಲಾಗುವುದು.

ನೇಮಕಾತಿ ಪ್ರಾಧಿಕಾರಿಗಳು
ಹಾಗೂ ಜಿಲ್ಲಾಧಿಕಾರಿಗಳು,
ಚಾಮರಾಜನಗರ ಜಿಲ್ಲೆ, ಚಾಮರಾಜನಗರ